MARCH 08,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಹೆಣ್ಣು ಮಕ್ಕಳ ಸಾಧನೆಯನ್ನು ಗುರುತಿಸಿ, ಗೌರವಿಸುವ ಮತ್ತು ಮಹಿಳಾ ಸಮಾನತೆಯನ್ನು ಎತ್ತಿ ಹಿಡಿಯುವ ಉದ್ದೇಶದಿಂದ, ಇಂದು ಅಂತಾರಾಷ್ಟ್ರೀಯ ಮಹಿಳಾ ದಿನವನ್ನು, ದೇಶಾದ್ಯಂತ 'ಕ್ರಿಯೆಯ ವೇಗವರ್ಧಿಸಿ' ಎಂಬ ಧ್ಯೇಯದೊಂದಿಗೆ, #SheBuildsBharat ಗುರಿಯೊಂದಿಗೆ ಆಚರಿಸಲಾಗುತ್ತಿದೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್' ನ 119ನೇ ಸಂಚಿಕೆಯಲ್ಲಿ, ಸಾಧಕ ನಾರಿಶಕ್ತಿಯ ಕರ್ತೃತ್ವ ಶಕ್ತಿಯನ್ನು ಸಂಭ್ರಮಿಸುವಂತೆ, ಜನತೆಯಲ್ಲಿ ಮನವಿ ಮಾಡಿದ್ದಾರೆ.

<><><>

ಅಂತಾರಾಷ್ಟ್ರೀಯ ಮಹಿಳಾ ದಿನದ ಪ್ರಯುಕ್ತ, ದೇಶದ ಎಲ್ಲ ಜಿಲ್ಲೆಗಳಲ್ಲಿ ವಿವಾಹಪೂರ್ವ ಆಪ್ತ ಸಮಾಲೋಚನೆ ನೀಡುವ ಸಂವಹನ ಕೇಂದ್ರಗಳನ್ನು ಸ್ಥಾಪಿಸುವುದಾಗಿ ರಾಷ್ಟ್ರೀಯ ಮಹಿಳಾ ಆಯೋಗ ಪ್ರಕಟಿಸಿದೆ.

<><><>

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಇಂದು ರಾತ್ರಿ 8 ಗಂಟೆಯಿಂದ 8:45 ರ ವರೆಗೆ ಧಾರವಾಡ ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಹಿಳೆಯರೊಂದಿಗೆ ಸಂವಾದ ನಡೆಸಲಿದ್ದಾರೆ. ಆಸಕ್ತರು, ದೂರವಾಣಿ ಸಂಖ್ಯೆ: 0836 2443414 ಸಂಖ್ಯೆಗೆ ಕರೆ ಮಾಡಿ ತಮ್ಮ ಸಮಸ್ಯೆ, ಅಭಿಪ್ರಾಯಗಳನ್ನು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರೊಂದಿಗೆ ಹಂಚಿಕೊಳ್ಳಬಹುದಾಗಿದೆ.

<><><>

ಉಡುಪಿ, ಎಂಜಿಎಂ ಕಾಲೇಜಿನ ರವೀಂದ್ರ ಮಂಟಪದಲ್ಲಿ, ಸಾಗರದ ಹೆಗ್ಗೋಡು– ಭೀಮನಕೋಣೆಯ ಚರಕ ಮಹಿಳಾ ವಿವಿಧೋದ್ದೇಶ ಕೈಗಾರಿಕಾ ಸಹಕಾರ ಸಂಘ ಆಯೋಜಿಸಿರುವ, ಮೂರು ದಿನಗಳ ಕೈ ಉತ್ಪನ್ನ ಹಾಗೂ ಕೈಮಗ್ಗ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ಮೇಳವನ್ನು, ಅದಮಾರು ಮಠದ ಶ್ರೀ ಈಶ ಪ್ರಿಯ ತೀರ್ಥ ಸ್ವಾಮೀಜಿ ಉದ್ಘಾಟಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..